## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಹರೀಶ್ ಕುಮಾರ್, ಹಿಂದಿನ ಸಹಾಯಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರ್ ಉಪ ವಿಭಾಗ, ತರೀಕೆರೆ ಪ್ರಸ್ತುತ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ವಿಭಾಗ, ಚಿಕ್ಕಮಗಳೂರು ಇವರ ವಿರುದ್ಧದ ಆರೋಪಗಳ ಕುರಿತು ವಿಚಾರಣೆ ನಡೆಸಿರುವ ಶ್ರೀ ಸಿದ್ದೇಶ್ ಪೋತಲ್‌ಕಟ್ಟಿ, ಸರ್ಕಾರದ ಜಂಟಿ ಕಾರ್ಯದರ್ಶಿ (ಆಡಳಿತ-1) ಹಾಗೂ ವಿಚಾರಣಾಧಿಕಾರಿ, ಇವರಿಗೆ ಸಂಚಿತ ಸಂಭಾವನೆ ಮಂಜೂರು ಮಾಡುವ ಬಗ್ಗೆ.

**ಓದಲಾಗಿದೆ:-**
1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 22 ವಿಸೇಬಿ 2021, ದಿನಾಂಕ: 14.07.2021.
2. ಶ್ರೀ ಸಿದ್ದೇಶ್ ಪೋತಲ್‌ಕಟ್ಟಿ, ಸರ್ಕಾರದ ಜಂಟಿ ಕಾರ್ಯದರ್ಶಿ (ಆಡಳಿತ-1) ಹಾಗೂ ವಿಚಾರಣಾಧಿಕಾರಿಯವರು ಇವರ ದಿನಾಂಕ: 17.02.2022ರ ವಿಚಾರಣಾ ವರದಿ
3. ಶ್ರೀ ಸಿದ್ದೇಶ್ ಪೋತಲ್‌ಕಟ್ಟಿ, ಸರ್ಕಾರದ ಜಂಟಿ ಕಾರ್ಯದರ್ಶಿ (ಆಡಳಿತ-1) ಹಾಗೂ ವಿಚಾರಣಾಧಿಕಾರಿಯವರು ಇವರ ದಿನಾಂಕ: 16.03.2022ರ ಪತ್ರ

*****

**ಪ್ರಸ್ತಾವನೆ:**

ಚಿಕ್ಕಮಗಳೂರು ಜಿಲ್ಲೆ ತರೀಕೆರೆ ತಾಲ್ಲೂಕು ಪಂಚಾಯತಿಯಲ್ಲಿ 2013-14ನೇ ಸಾಲಿನ ವಿವಿಧ ಅನಿರ್ಬಂಧಿತ ಅನುದಾನದಡಿ ಕಾಮಗಾರಿ ನಿರ್ವಹಿಸದೇ ಹಣ ದುರುಪಯೋಗಪಡಿಸಿಕೊಂಡಿರುವ ಆರೋಪದ ಮೇಲೆ **ಶ್ರೀ ವಿ.ಹರೀಶ್ ಕುಮಾರ್**, ಹಿಂದಿನ ಸಹಾಯಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ತರೀಕೆರೆ, ಪ್ರಸ್ತುತ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ವಿಭಾಗ, ಚಿಕ್ಕಮಗಳೂರು ಇವರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 11(18)ರನ್ವಯ ಇಲಾಖಾ ವಿಚಾರಣೆಯನ್ನು ನಡೆಸಲು, ಅದೇ ನಿಯಮಾವಳಿಗಳ ನಿಯಮ-11 (2) ಮತ್ತು (5)(ಎ) ರ ಪ್ರಕಾರ **ಶ್ರೀ ಸಿದ್ದೇಶ್ ಪೋತಲ್‌ಕಟ್ಟಿ, ಸರ್ಕಾರದ ಜಂಟಿ ಕಾರ್ಯದರ್ಶಿ (ಆಡಳಿತ-1), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ** ಇವರನ್ನು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ **ದಿನಾಂಕ:14.07.2021ರ** ಸರ್ಕಾರಿ ಆದೇಶದಲ್ಲಿ, ವಿಚಾರಣಾಧಿಕಾರಿಯನ್ನಾಗಿ ನೇಮಿಸಲಾಗಿತ್ತು. ಅದರಂತೆ, ಸದರಿಯವರು ಪ್ರಕರಣದ ಮುಂದುವರೆದ ಇಲಾಖಾ ವಿಚಾರಣೆ ನಡೆಸಿ ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ **ದಿನಾಂಕ:17.02.2022ರಂದು** ಶಿಸ್ತು ಪ್ರಾಧಿಕಾರಿಯಾದ ಸರ್ಕಾರಕ್ಕೆ ವಿಚಾರಣಾ ವರದಿಯನ್ನು ಸಲ್ಲಿಸುತ್ತಾ, ಸಂಭಾವನೆಯನ್ನು ಮಂಜೂರು ಮಾಡುವಂತೆ ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಓದಲಾದ ದಿನಾಂಕ:16.03.2022ರ ಮನವಿಯಲ್ಲಿ ಕೋರಿರುತ್ತಾರೆ.

ವಿಚಾರಣಾಧಿಕಾರಿಯವರು, ಇಲಾಖಾ ವಿಚಾರಣೆಯನ್ನು ನಡೆಸಿ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿರುವುದರಿಂದ, ವಿಚಾರಣಾಧಿಕಾರಿಯವರಿಗೆ ಅವರ ನೇಮಕಾತಿ ಸಂದರ್ಭದಲ್ಲಿ ಚಾಲ್ತಿಯಲ್ಲಿದ್ದಂತೆ ಸಂಚಿತ ಸಂಭಾವನೆ ಹಾಗೂ ವಾಹನ ಭತ್ಯೆಯನ್ನು ಮಂಜೂರು ಮಾಡಲು ಸರ್ಕಾರವು ತೀರ್ಮಾನಿಸಿ ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 29 ವಿಸೇಬಿ 2021**
**ಬೆಂಗಳೂರು ದಿನಾಂಕ:06-04-2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, **ಶ್ರೀ ಸಿದ್ದೇಶ್ ಪೋತಲ್‌ಕಟ್ಟಿ, ಸರ್ಕಾರದ ಜಂಟಿ ಕಾರ್ಯದರ್ಶಿ (ಆಡಳಿತ-1), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ**

...2

ಹಾಗೂ ವಿಚಾರಣಾಧಿಕಾರಿಗಳು, ಇವರಿಗೆ ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 11 ಸೇಇವಿ 2019, ದಿನಾಂಕ:24.04.2019ರ ಪ್ರಕಾರ ವಾಹನ ಭತ್ಯೆಯೂ ಸೇರಿದಂತೆ ಒಟ್ಟು **ರೂ.11,000/-** (ರೂ. ಹನ್ನೊಂದು ಸಾವಿರಗಳು ಮಾತ್ರ) ಗಳ ಸಂಭಾವನೆ ಮಂಜೂರು ಮಾಡಿದೆ.

ಶ್ರೀ ಸಿದ್ದೇಶ್ ಪೋತಲ್‌ಕಟ್ಟಿ, ಸರ್ಕಾರದ ಜಂಟಿ ಕಾರ್ಯದರ್ಶಿ (ಆಡಳಿತ-1), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ವಿಚಾರಣಾಧಿಕಾರಿಗಳು, ಇವರಿಗೆ **ಸದರಿ ಮೊತ್ತವನ್ನು ಪಾವತಿಸುವ ಕುರಿತು ಕೂಡಲೇ ಅಗತ್ಯ ಕ್ರಮ ವಹಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು ಇವರಿಗೆ ಸೂಚಿಸಿದೆ.**

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ

26/04/2022

**(ಬಾಲಪ್ಪ)**
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಬಿ &ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ,**

1. ಪ್ರಧಾನ ಮಹಾಲೇಖಪಾಲರು, ಕರ್ನಾಟಕ, ಹೊಸ ಕಟ್ಟಡ, **"ಆಡಿಟ್ ಭವನ"**, ಬೆಂಗಳೂರು-01.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು.
3. ಶ್ರೀ ಸಿದ್ದೇಶ್ ಪೋತಲ್‌ಕಟ್ಟಿ, ಸರ್ಕಾರದ ಜಂಟಿ ಕಾರ್ಯದರ್ಶಿ (ಆಡಳಿತ-1), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
4. ಸರ್ಕಾರದ ಉಪ ಕಾರ್ಯದರ್ಶಿ (ಆಡಳಿತ-2) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
5. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅಪಂ.ರಾಜ್ ಇಲಾಖೆ.
6. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.